## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಬಿ. ಮಹದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಲಿಂಗಸೂಗೂರು ಇವರ ವಿರುದ್ಧದ ಇಲಾಖಾ ವಿಚಾರಣೆ ಜರುಗಿಸಲು ಬದಲಿ ಮಂಡನಾಧಿಕಾರಿಯನ್ನು ನೇಮಕಾತಿ ಮಾಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 67 ವಿಸೇಬಿ 2012 ದಿನಾಂಕ:01-07-2013.
2. ಶ್ರೀ ಫ. ನಿ. ಗುಡ್ಡಾಕಾರ, ವಿಚಾರಣಾಧಿಕಾರಿಯವರು ಇವರ ಪತ್ರ ದಿನಾಂಕ:13-12-2013.

-----

**ಪ್ರಸ್ತಾವನೆ:**

ಶ್ರೀ ಬಿ. ಮಹದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸೂಗೂರು, ಇವರು ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ 2011-12ನೇ ಸಾಲಿನಲ್ಲಿ ಎಂಜಿಎನ್ಆರ್ಇಜಿಎಸ್ ಯೋಜನೆಯ ಅನುಷ್ಠಾನದಲ್ಲಿ ಎಸಗಿರುವ ಅವ್ಯವಹಾರ/ ದುರ್ನಡತೆ ಕುರಿತಂತೆ ಇಲಾಖಾ ವಿಚಾರಣೆ ನಡೆಸಲು ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 01-07-2013 ರ ಸರ್ಕಾರಿ ಆದೇಶದಲ್ಲಿ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲಾಗಿತ್ತು.

ಮಂಡನಾಧಿಕಾರಿಗಳಿಗೆ ಸಾಕಷ್ಟು ಕಾಲಾವಕಾಶ ನೀಡಿದ್ದರೂ ಸಹ ಸದರಿಯವರು ಒಮ್ಮೆಯೂ ಮಂಡನಾಧಿಕಾರಿಯಾಗಿ ವಿಚಾರಣೆಗೆ ಹಾಜರಾಗಿ ಕರ್ತವ್ಯ ನಿರ್ವಹಿಸಿಲ್ಲವೆಂದು ತಿಳಿಸುತ್ತಾ, ವಿಚಾರಣೆಯನ್ನು ಮುಕ್ತಾಯಗೊಳಿಸಿ ಓದಲಾದ (2)ರ ಪತ್ರದೊಂದಿಗೆ ವಿಚಾರಣಾಧಿಕಾರಿಯವರು ಸರ್ಕಾರಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿರುತ್ತಾರೆ. ಆದ್ದರಿಂದ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಬದಲಿಗೆ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲು ಮತ್ತು ವಿಚಾರಣಾಧಿಕಾರಿಗಳು ಈ ಪ್ರಕರಣವನ್ನು ವಿಚಾರಣಾ ಹಂತದಿಂದ ಪ್ರಾರಂಭಿಸಿ ಪರಿಷ್ಕೃತ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಲು ಸಹ ತೀರ್ಮಾನಿಸಿರುತ್ತದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 67 ವಿಸೇಬಿ 2012 ಬೆಂಗಳೂರು, ದಿನಾಂಕ:31-01-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಬಿ.ಮಹದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸೂಗೂರು, ಇವರ ವಿರುದ್ಧದ ಇಲಾಖಾ ವಿಚಾರಣಾ ಪ್ರಕರಣದಲ್ಲಿ ವಿಚಾರಣಾಧಿಕಾರಿಗಳ ಮುಂದೆ ಪ್ರಕರಣವನ್ನು ಮಂಡಿಸಲು ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ರಾಯಚೂರು ಇವರ ಬದಲಿಗೆ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ರಾಯಚೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ. ಹಾಗೂ ವಿಚಾರಣಾ ವರದಿ ಹಾಗೂ ದಾಖಲೆಗಳನ್ನು ವಿಚಾರಣಾಧಿಕಾರಿಯವರಿಗೆ ಹಿಂದಿರುಗಿಸುತ್ತಾ, ವಿಚಾರಣಾಧಿಕಾರಿಯವರು, ಈ ಪ್ರಕರಣದ ವಿಚಾರಣೆಯನ್ನು, ಮಂಡನಾಧಿಕಾರಿ ಹೇಳಿಕೆ, ಸಾಕ್ಷಿ ಇತ್ಯಾದಿ ಪಡೆಯುವ ಹಂತದಿಂದ ಮುಂದುವರೆಸಿ ಕರ್ನಾಟಕ ನಾಗರೀಕ ಸೇವಾ (ವ.ನಿಮೆ)

ನಿಯಮಗಳು 1957 ರ ನಿಯಮ 11ರಡಿ ನಿಗದಿಪಡಿಸಿರುವ ವಿಧಾನವನ್ನು ಅನುಸರಿಸಿ ವಿಚಾರಣೆ ನಡೆಸಿ ಅದರಂತೆ ಪರಿಷ್ಕೃತ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು
3. ಶ್ರೀ ಪಿ.ಸಿ. ಗುಡ್ಡಾಕಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಗಣಪತಿ ಗುಡಿ ಹತ್ತಿರ, ಸಂಗೊಳ್ಳಿ ರಾಯಣ್ಣ ನಗರ, ಧಾರವಾಡ, (ವಿಚಾರಣಾಧಿಕಾರಿ) (ಫೋನ ನಂ. 2468793)
4. ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ರಾಯಚೂರು
5. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ರಾಯಚೂರು (ಮಂಡನಾಧಿಕಾರಿ).
6. ಶ್ರೀ ಬಿ. ಮಹದೇವಯ್ಯ, ಕಾರ್ಯನಿರ್ವಾಹಕ ಅಧಿಕಾರಿ, (ನಿವೃತ್ತ) ಮನೆ ನಂ.8/ಎ, 4ನೇ ಮುಖ್ಯ ರಸ್ತೆ, 10ನೇ ಕ್ರಾಸ್, ಆಲನಹಳ್ಳಿ ಲೇಔಟ್, ಮೈಸೂರು.
7. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) /ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
9. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
10. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.